ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ:ಕೆ3/ NMMS/ಪರೀಕ್ಷೆ/24/2021-22 ದಿನಾಂಕ:25.01.2022

## ಜ್ಞಾಪನ

ವಿಷಯ:- 2021-22ನೇ ಸಾಲಿನ NMMS ಪರೀಕ್ಷೆಗೆ ಸಂಬಂಧಿಸಿದಂತೆ ಪರೀಕ್ಷಾ ಶುಲ್ಕವನ್ನು ಶಾಲಾ Login ನಲ್ಲಿ ಜನರೇಟ್ ಆಗುವ ಚಲನ್ ಬಳಸಿ ಪರೀಕ್ಷಾ ಶುಲ್ಕವನ್ನು ಪಾವತಿಸುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಸುತ್ತೋಲೆ ಸಮಸಂಖ್ಯೆ, ದಿನಾಂಕ: 04.01.2022

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಸಾಲಿನ NMMS ಪರೀಕ್ಷೆಯನ್ನು ದಿನಾಂಕ:**27.02.2022** ರಂದು ನಡೆಸಲಾಗುತ್ತದೆ. NMMS ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು **26.01.2022** ರಂದು ಅಂತಿಮ ದಿನಾಂಕವಾಗಿರುತ್ತದೆ.

NMMS ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಪ್ರತಿ ಶಾಲೆಗೆ ಒಂದರಂತೆ **ದಿನಾಂಕ:27.01.2022** ರಿಂದ ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಆಗಲಿದೆ. ಶಾಲೆಯ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಚಲನ್‌ಗಳನ್ನು ಶಾಲಾ ಲಾಗಿನ್‌ನಲ್ಲಿ Download ಮಾಡಿ ಮುದ್ರಿಸಿಕೊಂಡು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ ದಿನಾಂಕ: **27.01.2022** ರಿಂದ **31.01.2022** ರವರೆಗೆ ಕಡ್ಡಾಯವಾಗಿ ಪರೀಕ್ಷಾ ಶುಲ್ಕ ಪಾವತಿಸುವುದು. **NMMS ಪರೀಕ್ಷಾ ಶುಲ್ಕವನ್ನು ಕೆನರಾ ಬ್ಯಾಂಕ್ ಹೊರತುಪಡಿಸಿ ಇತರೆ ಬ್ಯಾಂಕುಗಳಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ.**

ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಿದ ಶಾಲೆಯ ವಿದ್ಯಾರ್ಥಿಗಳಿಗೆ ಮಾತ್ರ ಶಾಲಾ ಲಾಗಿನ್‌ನಲ್ಲಿ ಪ್ರವೇಶ ಪತ್ರವನ್ನು ಲಭ್ಯಮಾಡಲಾಗುವುದು. ಒಂದು ವೇಳೆ ಅರ್ಜಿ ಸಲ್ಲಿಸಿ ಪರೀಕ್ಷಾ ಶುಲ್ಕ ಪಾವತಿಸದೆ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾದಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಜವಾಬ್ದಾರರಾಗಿರುತ್ತಾರೆ. ಈ ಬಗ್ಗೆ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳು ಮುಖ್ಯಶಿಕ್ಷಕರು/ಪ್ರಾಂಶುಪಾಲರಿಗೆ ಅಗತ್ಯ ಸೂಚನೆಗಳನ್ನು ನೀಡಲು ತಿಳಿಸಿದೆ.

Sulekha 25/1

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯೂ.ಎ.ಎ.ಸಿ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2. NMMS ಪರೀಕ್ಷಾ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3. ಎಲ್ಲಾ ಬ್ಲಾಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.